176(559) ಶ್ರೀ ಬಂಡೆಪ್ಪ ಕಾಶೆಂಪೂರ: (ಬೀದರ್ ದಕ್ಷಿಣ) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಾರ್ವಜನಿಕ / ಖಾಸಗಿ ಸಹಭಾಗಿತ್ವದಲ್ಲಿ ಯೋಜನೆಗಳನ್ನು ರೂಪಿಸಲು ಕೃಷಿ ಮಾರುಕಟ್ಟೆ ಇಲಾಖೆಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು);

ಆ) ಈ ಯೋಜನೆಯನ್ನು ಪ್ರಾರಂಭಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

ಇ) ಈ ಯೋಜನೆಯಿಂದ ಸಾರ್ವನಿಕರಿಗೆ ಆಗುವ ಉಪಯೋಗಗಳೇನು (ವಿವರ ನೀಡುವುದು)?

ಶ್ರೀ ಶಿವರಾಜ್ ಎಸ್ ತಂಗಡಗಿ(ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ರಾಜ್ಯದಲ್ಲಿ ಸಾರ್ವಜನಿಕ / ಖಾಸಗಿ ಸಹಭಾಗಿತ್ವದಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಈ ಇಲಾಖೆಯಲ್ಲಿ ಯಾವುದೇ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ.

ಆ) & ಇ) ಸರ್ಕಾರದ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ನೀಡಿರುವ ಮಾರ್ಗಸೂಚಿ ಮತ್ತು ನಿಯಮಗಳನ್ನು ಅನುಸರಿಸಿ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಈ ಯೋಜನೆಯನ್ನು ಅನುಷ್ಠಾನಗೊಳಿಸುವುದರಿಂದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ರೈತರಿಗೆ ಮತ್ತು ಪೇಟೆ ಕಾರ್ಯಕರ್ತರಿಗೆ ಮಾರಾಟ ಚಟುವಟಿಕೆಗಳೀಗೆ ಹೆಚ್ಚಿನ ಮೂಲಭೂತ ಸೌಲಭ್ಯಗಳು ಲಭ್ಯವಾಗುತ್ತವೆ.

ಸಕ್ಕರೆ ಕಾರ್ಖಾನೆ

177(319) ಡಾ:: ಬಗಲಿ ಸಾರ್ವಭೌಮ ಸಾತಗೌಡ: ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭೀಮಾ ಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ಶಂಕು ಸ್ಥಾಪನೆಯನ್ನು ಎಂದು ನೆರವೇರಿಸಲಾಯಿತು;

ಆ) ಆ ಕಾರ್ಖಾನೆ ಈಗ ಯಾವ ಹಂತದಲ್ಲಿದೆ;

ಇ) ಈ ಕಾರ್ಖಾನೆಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಶಿವರಾಜ್ ಎಸ್ ತಂಗಡಗಿ(ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಭೀಮಾ ಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಯು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿಯಲ್ಲಿ ಸಂಖ್ಯೆ ಡಿಎಸ್‌ಕೆ/10–1982–83 ದಿನಾಂಕ 20.4.1983ರಂದು ನೊಂದಣಿ ಆಗಿರುತ್ತದೆ.

ಆ) ಸಂಪನ್ಮೂಲದ ಕೊರತೆಯಿಂದಾಗಿ ಕಾರ್ಖಾನೆಯು ನಿರ್ಮಾಣದ ಹಂತದಲ್ಲಿಯೇ ಸ್ಥಗಿತಗೊಂಡ ಕಾರಣ ಈ ಕಾರ್ಖಾನೆಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 72ರನ್ವಯ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಆದೇಶ ಸಂಖ್ಯೆ: ಡಿಎಸ್‌ಕೆ/ಇಎಸ್‌ಟಿಎಸ್/ಎಲ್‌ಕ್ಯೂಡಿ/53/2006–07 ದಿನಾಂಕ: 28.2.2007ರನ್ವಯ ಸಮಾಪನೆಗೊಳಿಸಿ ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಳಗಾವಿ ಪ್ರಾಂತ್ಯ, ಬೆಳಗಾವಿ ಇವರನ್ನು ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ.

ಇ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ

178(320) ಡಾ.ಬಗಲಿ ಸಾರ್ವಭೌಮ ಸಾತಗೌಡ:(ಇಂಡಿ) ಮಾನ್ಯ ತೋಟಗಾರಿಕೆ ಮತ್ತು ಬಂದಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು ಯಾವುವು;

ಆ) ಈ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಇನ್ನೂ ಬಿಡುಗಡೆ ಆಗಬೇಕಾದ ಅನುದಾನವೆಷ್ಟು;

ಇ) ಈ ಅನುದಾನದಲ್ಲಿ ಕೇಂದ್ರ ಸರ್ಕಾರದ ಸಾಲ ಎಷ್ಟು, ರಾಜ್ಯ ಸರ್ಕಾರದ ಸಾಲ ಎಷ್ಟು; (ವಿವರ ನೀಡುವುದು)?

ಶ್ರೀ ಉಮೇಶ್ ವಿ ಕತ್ತಿ(ತೋಟಗಾರಿಕೆ ಮತ್ತು ಬಂದಿಖಾನೆ ಸಚಿವರು):

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.